# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2022-23ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮಕ್ಕೆ ಒದಗಿಸಿರುವ ಅನುದಾನದಲ್ಲಿ ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:-**

1. 2021-22 ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳ ಸಂಪುಟ-5.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 329 ಬಿಎಂಎಸ್ 2022, ದಿನಾಂಕ:08.08.2022,29.09.2022.
3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ: 23.09.2022.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ BCWD-14011/1/2022/BCWD-COORD-BCWD.

******

**ಪ್ರಸ್ತಾವನೆ:-**

ಮೇಲೆ ಓದಲಾದ (1) ರಲ್ಲಿ 2022-23ನೇ ಸಾಲಿನ ಆಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಅನುದಾನವನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ 2022-23ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮಕ್ಕೆ ಒದಗಿಸಿರುವ ಅನುದಾನದಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2022-23ನೇ ಸಾಲಿನಲ್ಲಿ ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (4)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಏಕ ಕಡತದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು 2022-23ನೇ ಸಾಲಿನ ಅಯವ್ಯಯದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಒದಗಿಸಿರುವ ಅನುದಾನದಲ್ಲಿ ಮೂರನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

17/11/22

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 329 ಬಿಎಂಎಸ್ 2022**
**ಬೆಂಗಳೂರು, ದಿನಾಂಕ: 17.11.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಅಯವ್ಯಯದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ: 2225-03-001-0-05(103)ರಡಿ ಒದಗಿಸಿರುವ ಅನುದಾನದಲ್ಲಿ ರೂ.30.00ಕೋಟಿಗಳನ್ನು (ಮೂವತ್ತು ಕೋಟಿಗಳನ್ನು ಮಾತ್ರ) ಮೂರನೇ ತ್ರೈಮಾಸಿಕ ಕಂತಿನ ಅನುದಾನವಾಗಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ

**ಷರತ್ತುಗಳು:**

1. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರು ಯೋಜನೆಯ ಮಾರ್ಗಸೂಚಿಗಳಂತೆ **ಪ್ರಸಕ್ತ ಸಾಲಿನಲ್ಲಿ ಮಂಜೂರಾತಿ ನೀಡಿರುವ ಸಂಘ-ಸಂಸ್ಥೆಗಳಿಗೆ ಮೊದಲನೇ ಕಂತಿನ ಅನುದಾನವನ್ನು ನಿಯಮಾನುಸಾರ ಬೇಡಿಕೆ ಬಂದಿರುವ ಪ್ರಸ್ತಾವನೆಗಳಿಗೆ** ಜೇಷ್ಠತೆ ಹಾಗೂ ಅರ್ಹತೆಯನುಸಾರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014 ಮತ್ತು ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017 ರನ್ವಯ ಅನುದಾನ ಬಿಡುಗಡೆ ಮಾಡತಕ್ಕದ್ದು. ಒಂದು ವೇಳೆ ಜೇಷ್ಠತೆಯನ್ನು ಹೊರತುಪಡಿಸಿ ಅನುದಾನ ಬಿಡುಗಡೆ ಮಾಡಿದ ಪಕ್ಷದಲ್ಲಿ ಹಾಗೂ ಸಂಘ/ಸಂಸ್ಥೆಗಳಿಂದ ದೂರುಗಳು ಸರ್ಕಾರದಲ್ಲಿ ಸ್ವೀಕೃತಗೊಂಡಲ್ಲಿ ಸಂಬಂಧಪಟ್ಟ ಪ್ರಾಧಿಕಾರ/ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗುವುದು.

2. 2022-23ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಮುಂದಿನ ಅನುದಾನದ ಕೋರಿಕೆ ಪ್ರಸ್ತಾವನೆಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

3. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿದೆಯೋ, ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.

4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ನಿಯಮಾನುಸಾರ ಸದ್ಬಳಕೆ ಮಾಡಿರುವ ಬಗ್ಗೆ ಎಲ್ಲಾ ರೀತಿಯ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.

17/11/22

3..

5. ಅನುದಾನ ಬಿಡುಗಡೆ ಮತ್ತು ಬಳಕೆಗೆ ಸಂಬಂಧಿಸಿದಂತೆ ಕಾಮಗಾರಿವಾರು/ ತಾಲ್ಲೂಕುವಾರು /ಜಿಲ್ಲಾವಾರು ವಿವರಗಳನ್ನು ಆಯುಕ್ತಾಲಯದ ಜಾಲತಾಣದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶದ ಸಂಖ್ಯೆ: ಆಇ 01 ಟಿಎಫ್‌ಪಿ 2022, ದಿನಾಂಕ:23.09.2022ರಲ್ಲಿ ಸರ್ಕಾರದ ಕಾರ್ಯದರ್ಶಿ /ಕಾರ್ಯದರ್ಶಿ ಇವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 17/11/2022

**(ಷಾಹೀನ್ ಪರ್ವೀನ್ .ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
4. ಖಜನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ ಇಲಾಖೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು,ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು,ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********